ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಒಂದು ರಾಷ್ಟ್ರ, ಒಂದು ಪಡಿತರ ಚೀಟಿ ಯೋಜನೆ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

240 (194) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದ ಒಂದು ರಾಷ್ಟ್ರ, ಒಂದು ಪಡಿತರ ಚೀಟಿ ಯೋಜನೆ ರಾಜ್ಯದಲ್ಲಿ ಯಾವಾಗ ಜಾರಿಗೆ ಬರಲಿದೆ ; ಇದರಿಂದ ಆಗುವ ಪ್ರಯೋಜನೆ ಏನು ;

(ಆ) ರಾಜ್ಯದಲ್ಲಿ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯಿಂದ ಪಡಿತರ ಪಡೆಯುವ ಫಲಾನುಭವಿಗಳಿಗೆ ಇ-ಕೆವೈಸಿ ವ್ಯವಸ್ಥೆಯು ಇನ್ನೂ ಜಾರಿಯಲ್ಲಿದೆಯೇ ; ಹಾಗಿದ್ದಲ್ಲಿ, ಎಷ್ಟು ಫಲಾನುಭವಿಗಳು ಇ-ಕೆವೈಸಿ ಪ್ರಯೋಜನೆ ಪಡೆದಿರುತ್ತಾರೆ ;

(ಇ) ಬೀದರ್ ಜಿಲ್ಲೆಯಲ್ಲಿ ಇದುವರೆಗೂ ವಿತರಿಸಲಾದ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) 2019-20ನೇ ಸಾಲಿನಲ್ಲಿ ಪತ್ತೆ ಹಚ್ಚಲಾದ ನಕಲಿ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಈ ಪ್ರಕರಣಗಳಲ್ಲಿ ಎಷ್ಟು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ?